**All India Radio: Bangalore**
**National Bulletin In Kannada**
**19.01.2026 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**19.01.2026 07.35 a.m.**
**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳದಲ್ಲಿ ೮೩೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಸ್ವಿಟ್ಜರ್‌ಲ್ಯಾಂಡ್‌ನ ದಾವೋಸ್‌ನಲ್ಲಿ ಇಂದಿನಿಂದ ವಿಶ್ವ ಆರ್ಥಿಕ ವೇದಿಕೆ ಸಭೆ ಆರಂಭ ; ೩ ಸಾವಿರಕ್ಕೂ ಹೆಚ್ಚು ಜಾಗತಿಕ ನಾಯಕರು ಭಾಗಿ
3. ಗಾಜಾದಲ್ಲಿ ಶಾಂತಿ ಸ್ಥಾಪಿಸುವ ಗುರಿಯ ಶಾಂತಿ ಮಂಡಳಿ ಭಾಗವಾಗಲು ಅಮೆರಿಕ ಅಧ್ಯಕ್ಷರಿಂದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆಹ್ವಾನ
4. ಭಾರತದ ವಿರುದ್ಧ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯನ್ನು ೨-೧ ಅಂತರದಲ್ಲಿ ಕೈವಶ ಮಾಡಿಕೊಂಡ ನ್ಯೂಜಿಲೆಂಡ್

<><><><>

ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ಸಿಂಗೂರಿನಲ್ಲಿ ೮೩೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ನಿನ್ನೆ ಶಿಲಾನ್ಯಾಸ ನೆರವೇರಿಸಿ ಉದ್ಘಾಟಿಸಿದರು. ಒಳನಾಡಿನ ಜಲ ಸಾರಿಗೆ ಐಡಬ್ಲ್ಯೂಟಿ ಟರ್ಮಿನಲ್ ಮತ್ತು ರಸ್ತೆ ಮೇಲ್ಸೇತುವೆ ಸೇರಿದಂತೆ ಬಾಲಗಢದಲ್ಲಿ ವಿಸ್ತೃತ ಬಂದರು ದ್ವಾರ ವ್ಯವಸ್ಥೆಯ ಶಿಲಾನ್ಯಾಸವನ್ನು ಪ್ರಧಾನಿ ನೆರವೇರಿಸಿದರು. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಎಲ್ಲಾ ಕೇಂದ್ರ ಯೋಜನೆಗಳು ಪಶ್ಚಿಮ ಬಂಗಾಳದ ಅಭಿವೃದ್ಧಿಯನ್ನು ವೇಗಗೊಳಿಸುತ್ತವೆ. ಅಭಿವೃದ್ಧಿ ಹೊಂದಿದ ಪೂರ್ವ ಭಾರತದ ಗುರಿಯನ್ನು ಪೂರೈಸಲು ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಅವರು ಹೇಳಿದರು. ಸುಮಾರು ೯೦೦ ಎಕರೆ ಪ್ರದೇಶದಲ್ಲಿ ವ್ಯಾಪಿಸಿರುವ ಬಾಲಗಢವನ್ನು ವಾರ್ಷಿಕ ೨.೭ ಮಿಲಿಯನ್ ಟನ್ ಎಂಟಿಪಿಎ ಸಾಮರ್ಥ್ಯದೊಂದಿಗೆ ಆಧುನಿಕ ಸರಕು ನಿರ್ವಹಣಾ ಟರ್ಮಿನಲ್ ಆಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಈ ಯೋಜನೆಯು ಎರಡು ಮೀಸಲಾದ ಸರಕು ನಿರ್ವಹಣಾ ಜೆಟ್ಟಿಗಳ ನಿರ್ಮಾಣವನ್ನು ಒಳಗೊಂಡಿದೆ ಎಂದು ಅವರು ತಿಳಿಸಿದರು. ಕಳೆದ ಹನ್ನೊಂದು ವರ್ಷಗಳಲ್ಲಿ ಕೇಂದ್ರವು ಕೋಲ್ಕತ್ತಾದ ಶ್ಯಾಮ ಪ್ರಸಾದ್ ಮುಖರ್ಜಿ ಬಂದರಿನ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುತ್ತಿದೆ ಮತ್ತು ಲಾಜಿಸ್ಟಿಕ್ಸ್ ಅಭಿವೃದ್ಧಿಗೆ ಸಹ ಕೊಡುಗೆ ನೀಡಿದೆ ಎಂದು ಪ್ರಧಾನಿ ಹೇಳಿದರು. ಈ ಎಲ್ಲಾ ಯೋಜನೆಗಳು ಉದ್ಯೋಗವನ್ನು ಸೃಷ್ಟಿಸುತ್ತವೆ. ಬಹುಮಾದರಿ ಸಂಪರ್ಕಕ್ಕೆ ಸರ್ಕಾರವು ವಿಶೇಷ ಪ್ರಾಮುಖ್ಯತೆಯನ್ನು ನೀಡಿದೆ ಎಂದರು. ಪ್ರಧಾನಮಂತ್ರಿ ಜಯರಾಂಬಾಟಿ-ಬರೋಗೋಪಿನಾಥಪುರ-ಮೇನಾಪುರ ಹೊಸ ರೈಲು ಮಾರ್ಗವನ್ನು ಉದ್ಘಾಟಿಸಿದರು. ಈ ಮಾರ್ಗವು ತಾರಕೇಶ್ವರ-ಬಿಷ್ಣುಪುರ ಹೊಸ ರೈಲು ಮಾರ್ಗ ಯೋಜನೆಯ ಪ್ರಮುಖ ಭಾಗವಾಗಿದೆ. ಹೊಸ ರೈಲು ಮಾರ್ಗದ ಜೊತೆಗೆ, ಮೇನಾಪುರ ಮತ್ತು ಜಯರಾಂಬಾಟಿ ನಡುವಿನ ಹೊಸ ರೈಲು ಸೇವೆಗೆ, ಬರೋಗೋಪಿನಾಥಪುರದಲ್ಲಿ ನಿಲುಗಡೆಯೊಂದಿಗೆ ಚಾಲನೆ ನೀಡಲಾಗುವುದು. ಮೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ - ಹೌರಾ - ಆನಂದ್ ವಿಹಾರ್ ಟರ್ಮಿನಲ್ ಅಮೃತ್ ಭಾರತ್ ಎಕ್ಸ್‌ಪ್ರೆಸ್; ಸೀಲ್ದಾ - ಬನಾರಸ್ ಅಮೃತ್ ಭಾರತ್ ಎಕ್ಸ್‌ಪ್ರೆಸ್; ಸಂತ್ರಗಚಿ-ತಾಂಬರಂ ಅಮೃತ್ ಭಾರತ್ ಎಕ್ಸ್‌ಪ್ರೆಸ್ ಮತ್ತು ಒಂದು ಪ್ರಯಾಣಿಕ ಎಕ್ಸ್‌ಪ್ರೆಸ್ ಅನ್ನು ಪ್ರಧಾನಿ ಉದ್ಘಾಟಿಸಿದರು.

<><><><>

ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷರ ಚುನಾವಣೆಗೆ ಇಂದು ನಾಮಪತ್ರ ಸಲ್ಲಿಕೆಯಾಗಲಿದೆ. ಪಕ್ಷದ ರಾಷ್ಟ್ರೀಯ ಚುನಾವಣಾ ಅಧಿಕಾರಿ ಕೆ.ಲಕ್ಷ್ಮಣ್ ಬಿಡುಗಡೆ ಮಾಡಿದ ಚುನಾವಣಾ ವೇಳಾಪಟ್ಟಿಯ ಪ್ರಕಾರ, ನಾಮಪತ್ರಗಳನ್ನು ಮಧ್ಯಾಹ್ನ ೨ ರಿಂದ ಸಂಜೆ ೪ ರವರೆಗೆ ಸಲ್ಲಿಸಬಹುದಾಗಿದೆ. ನಾಮಪತ್ರಗಳ ಪರಿಶೀಲನೆ ಸಂಜೆ ೪ ರಿಂದ ಸಂಜೆ ೫ ರವರೆಗೆ ನಡೆಯಲಿದೆ, ನಂತರ ನಾಮಪತ್ರಗಳನ್ನು ಹಿಂಪಡೆಯಲು ಸಂಜೆ ೬ ಗಂಟೆಯವರೆಗೆ ಸಮಯವಿರುತ್ತದೆ. ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ, ಅಗತ್ಯವಿದ್ದರೆ, ನಾಳೆ ಮತದಾನ ನಡೆಯಲಿದೆ. ನೂತನ ಅಧ್ಯಕ್ಷರ ಅಧಿಕೃತ ಘೋಷಣೆಯನ್ನು ಅಂದೇ ಮಾಡಲಾಗುವುದು. ಸಂಪೂರ್ಣ ಚುನಾವಣಾ ಪ್ರಕ್ರಿಯೆ ನವದೆಹಲಿಯಲ್ಲಿರುವ ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆಯಲಿದೆ. ಪ್ರಸ್ತುತ, ಈ ಹುದ್ದೆಯನ್ನು ಕೇಂದ್ರ ಸಚಿವ ಜಗತ್ ಪ್ರಕಾಶ್ ನಡ್ಡಾ ನಿರ್ವಹಿಸುತ್ತಿದ್ದಾರೆ. ಜೆ.ಪಿ.ನಡ್ಡಾ ಅವರನ್ನು ಜೂನ್ ೨೦೧೯ ರಲ್ಲಿ ಬಿಜೆಪಿಯ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರನ್ನಾಗಿ ನೇಮಿಸಲಾಯಿತು

ಮತ್ತು ನಂತರ ೨೦೨೦ ರ ಜನವರಿಯಲ್ಲಿ ಅವರು, ಆಗಿನ ಅಧ್ಯಕ್ಷ ಅಮಿತ್ ಶಾ ಅವರ ನಂತರ ಪಕ್ಷದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

<><><>

ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ವಿಶ್ವ ಆರ್ಥಿಕ ವೇದಿಕೆ ಸಭೆ ಇಂದಿನಿಂದ ಆರಂಭವಾಗಲಿದೆ. ದಾವೋಸ್‌ನಲ್ಲಿ ನಡೆಯುವ ೫೬ನೇ ವಾರ್ಷಿಕ ಸಭೆಯಲ್ಲಿ ೩ ಸಾವಿರಕ್ಕೂ ಹೆಚ್ಚು ಜಾಗತಿಕ ನಾಯಕರು ಭಾಗವಹಿಸುತ್ತಿದ್ದಾರೆ.

ಐದು ದಿನಗಳ ಜಾಗತಿಕ ಚರ್ಚಾಕೂಟದಲ್ಲಿ ಭಾಗವಹಿಸಲು ೧೦೦ಕ್ಕೂ ಹೆಚ್ಚು ಭಾರತೀಯ ಕಾರ್ಯನಿರ್ವಹಣಾಧಿಕಾರಿಗಳು ಸರ್ಕಾರಿ ನಿಯೋಗದೊಂದಿಗೆ ಸ್ವಿಸ್ ಪಟ್ಟಣ ತಲುಪಿದ್ದಾರೆ. ಅಶ್ವಿನಿ ವೈಷ್ಣವ್, ಪ್ರಹ್ಲಾದ್ ಜೋಶಿ ಮತ್ತು ಕೆ ರಾಮಮೋಹನ್ ನಾಯ್ಡು ಸೇರಿದಂತೆ ಹಿರಿಯ ಕೇಂದ್ರ ಸಚಿವರು ಭಾಗವಹಿಸುವ ನಿರೀಕ್ಷೆಯಿದ್ದು, ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ, ಮಹಾರಾಷ್ಟ್ರ, ಆಂಧ್ರಪ್ರದೇಶ, ಮಧ್ಯಪ್ರದೇಶ, ಅಸ್ಸಾಂ ಮತ್ತು ಜಾರ್ಖಂಡ್ ಮುಖ್ಯಮಂತ್ರಿಗಳು ತಮ್ಮ ರಾಜ್ಯಗಳನ್ನು ಸಂಭಾವ್ಯ ಹೂಡಿಕೆದಾರರಿಗೆ ಪ್ರದರ್ಶಿಸಲಿದ್ದಾರೆ. ಕರ್ನಾಟಕ, ಉತ್ತರ ಪ್ರದೇಶ, ಕೇರಳ ಮತ್ತು ತೆಲಂಗಾಣ ಸೇರಿದಂತೆ ವಿವಿಧ ರಾಜ್ಯ ಸರ್ಕಾರಗಳ ಮಂಟಪಗಳು ಸಹ ಇಲ್ಲಿವೆ.

<><><>

ಗಾಜಾದಲ್ಲಿ ಶಾಶ್ವತ ಶಾಂತಿ ತರುವ ನಿಟ್ಟಿನಲ್ಲಿ ಕೆಲಸ ಮಾಡುವ "ಶಾಂತಿ ಮಂಡಳಿ"ಯ ಭಾಗವಾಗಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಪ್ರಧಾನಿ ನರೇಂದ್ರ ಮೋದಿಯವರನ್ನು ಆಹ್ವಾನಿಸಿದ್ದಾರೆ. ಈ ಸಂಬಂಧ ಅಮೆರಿಕ ಅಧ್ಯಕ್ಷರು, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರವೊಂದನ್ನು ಕಳುಹಿಸಿದ್ದಾರೆ. ಇದನ್ನು ಭಾರತಕ್ಕೆ ಅಮೆರಿಕ ರಾಯಭಾರಿ ಸೆರ್ಗಿಯೊ ಗಾರ್ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಶಾಂತಿಯನ್ನು ಬಲಪಡಿಸುವ ನಿಟ್ಟಿನಲ್ಲಿ ಮತ್ತು ಇದರ ಜೊತೆಗೆ, ಜಾಗತಿಕ ಸಂಘರ್ಷವನ್ನು ಪರಿಹರಿಸಲು ದಿಟ್ಟ ಹೊಸ ವಿಧಾನವನ್ನು ಕೈಗೊಳ್ಳಲು ಪ್ರಧಾನಿಯವರನ್ನು ತಮ್ಮೊಂದಿಗೆ ಸೇರಲು ಆಹ್ವಾನಿಸುವುದು ತಮಗೆ ಗೌರವದ ವಿಷಯ ಎಂದು ಅಧ್ಯಕ್ಷ ಟ್ರಂಪ್ ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಗಾಜಾ ಪಟ್ಟಿಯಲ್ಲಿ ಇಸ್ರೇಲ್ ಮತ್ತು ಹಮಾಸ್ ನಡುವಿನ ಕದನ ವಿರಾಮ ಒಪ್ಪಂದದ ಎರಡನೇ ಹಂತದ ಭಾಗವಾಗಿ ಅಮೆರಿಕ ಅಧ್ಯಕ್ಷರು ಶಾಂತಿ ಮಂಡಳಿಯನ್ನು ಅನಾವರಣಗೊಳಿಸಿದರು. ಅಕ್ಟೋಬರ್‌ನಲ್ಲಿ, ಇಸ್ರೇಲ್ ಮತ್ತು ಉಗ್ರಗಾಮಿ ಗುಂಪು ಹಮಾಸ್ ಟ್ರಂಪ್ ಅವರ ಶಾಂತಿ ಯೋಜನೆಗೆ ಒಪ್ಪಿಕೊಂಡವು. ಗಾಜಾ ಮತ್ತು ಅದರಾಚೆಗೆ ಶಾಂತಿ ಮತ್ತು ಸ್ಥಿರತೆಯನ್ನು ತರಲು "ಶಾಂತಿ ಮಂಡಳಿ"ಯನ್ನು ವಾಷಿಂಗ್ಟನ್ ಹೊಸ ಅಂತಾರಾಷ್ಟ್ರೀಯ ಸಂಸ್ಥೆಯಾಗಿ ಬಿಂಬಿಸುತ್ತಿದೆ. ಅಧ್ಯಕ್ಷ ಟ್ರಂಪ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಬರೆದ ಪತ್ರದಲ್ಲಿ, ಸೆಪ್ಟೆಂಬರ್ ೨೯ ರಂದು ಗಾಜಾ ಸಂಘರ್ಷವನ್ನು ಕೊನೆಗೊಳಿಸುವ ಸಮಗ್ರ ಯೋಜನೆಯ ಬಗ್ಗೆ ಮತ್ತು ಮಧ್ಯಪ್ರಾಚ್ಯಕ್ಕೆ ಶಾಂತಿಯನ್ನು ತರುವ ಅವರ ೨೦-ಅಂಶಗಳ ಮಾರ್ಗಸೂಚಿಯ ಬಗ್ಗೆ ಉಲ್ಲೇಖಿಸಿದ್ದಾರೆ. ೨೦ ಅಂಶಗಳ ಯೋಜನೆಯಲ್ಲಿ ಗಾಜಾವನ್ನು ತನ್ನ ನೆರೆಹೊರೆಯವರಿಗೆ ಬೆದರಿಕೆಯನ್ನುಂಟು ಮಾಡದ, ಮೂಲಭೂತವಾದದಿಂದ ಮುಕ್ತವಾದ ಭಯೋತ್ಪಾದನಾ ಮುಕ್ತ ವಲಯವನ್ನಾಗಿ ಮಾಡುವುದು ಸೇರಿದೆ.

<><><>

ವಿಕಸಿತ ಭಾರತ್ ಜಿ ರಾಮ್ ಜಿ ಕಾಯ್ದೆಗೆ ಸಂಬಂಧಿಸಿದಂತೆ ಮಾಡಲಾಗುತ್ತಿರುವ ತಪ್ಪುದಾರಿಗೆಳೆಯುವ ಹೇಳಿಕೆಗಳಿಗೆ ಸರ್ಕಾರ ಬಲವಾದ ಖಂಡನೆ ವ್ಯಕ್ತಪಡಿಸಿದೆ. ಈ ಕಾಯ್ದೆಯ ವಿರುದ್ಧದ ವಿರೋಧ ಪಕ್ಷದ ಟೀಕೆ ವಾಸ್ತವಿಕವಾಗಿ ತಪ್ಪು ಮತ್ತು ದಾರಿ ತಪ್ಪಿಸುವಂತಿದೆ ಎಂದಿರುವ ಸರ್ಕಾರ, ವಿಕಸಿತ ಭಾರತ್-ಜಿ ರಾಮ್ ಜಿ ಕಾಯ್ದೆ, ೨೦೨೫ ಪ್ರತಿ ಗ್ರಾಮೀಣ ಕುಟುಂಬಕ್ಕೂ ಕನಿಷ್ಠ ೧೨೫ ದಿನಗಳ ಕೂಲಿ ಉದ್ಯೋಗವನ್ನು ಖಾತರಿಪಡಿಸುತ್ತದೆ ಎಂದು ಪುನರುಚ್ಚರಿಸಿದೆ. ಕೆಲಸದ ಹಕ್ಕನ್ನು ಕಸಿದುಕೊಳ್ಳಲಾಗುತ್ತಿದೆ ಎಂಬ ಹೇಳಿಕೆಗಳು ರಾಜಕೀಯ ಪ್ರೇರಿತವಾಗಿವೆ. ೧೫ ದಿನಗಳ ಒಳಗೆ ಉದ್ಯೋಗವನ್ನು ಒದಗಿಸಬೇಕು, ಇಲ್ಲದಿದ್ದರೆ ನಿರುದ್ಯೋಗ ಭತ್ಯೆ ಕಡ್ಡಾಯ ಎಂದು ಕಾಯ್ದೆ ಹೇಳುತ್ತದೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ವೇತನದ ಬಗ್ಗೆ ಸ್ಪಷ್ಟನೆ ನೀಡುತ್ತಾ, ಯೋಜನೆಯಡಿಯಲ್ಲಿ ಕೆಲಸ ಮಾಡಿದ ಪ್ರತಿಯೊಬ್ಬ ವ್ಯಕ್ತಿಯು ಪ್ರತಿ ದಿನದ ಕೆಲಸಕ್ಕೆ ಅಧಿಸೂಚಿತ ವೇತನ ದರದಲ್ಲಿ ವೇತನವನ್ನು ಪಡೆಯಲು ಅರ್ಹನಾಗಿರುತ್ತಾನೆ ಎಂದು ಕಾಯ್ದೆ ಸ್ಪಷ್ಟವಾಗಿ ಉಲ್ಲೇಖಿಸಿದೆ ಎಂದು ಸರ್ಕಾರ ತಿಳಿಸಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಯುನೈಟೆಡ್ ಅರಬ್ ಎಮಿರೇಟ್ಸ್ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಇಂದು ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಈ ಭೇಟಿಯು ಭಾರತ-ಯುಎಇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಮುನ್ನಡೆಸಲು ಮತ್ತು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಉಭಯ ನಾಯಕರಿಗೆ ಅವಕಾಶವನ್ನು ಒದಗಿಸುತ್ತದೆ ಎಂದು ನಿರೀಕ್ಷಿಸಲಾಗಿದೆ.

<><><>

ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ನಾಲ್ವರು ಮಹಿಳಾ ಕೇಡರ್‌ಗಳು ಸೇರಿದಂತೆ ಆರು ಮಾವೋವಾದಿಗಳನ್ನು ಹತ್ಯೆ ಮಾಡಲಾಗಿದೆ, ಜಿಲ್ಲಾ ಮೀಸಲು ಪಡೆ-ಡಿಆರ್‌ಜಿ, ಕೋಬ್ರಾ ಮತ್ತು ವಿಶೇಷ ಕಾರ್ಯಪಡೆ - ಎಸ್‌ಟಿಎಫ್ ಜಂಟಿ ತಂಡ ನಡೆಸಿದ ಈ ಕಾರ್ಯಾಚರಣೆಯು ಈ ಪ್ರದೇಶದಲ್ಲಿನ ಮಾವೋವಾದಿ ಚಟುವಟಿಕೆಗಳಿಗೆ ಗಮನಾರ್ಹ ಹೊಡೆತವನ್ನು ನೀಡಿದೆ.

<><><><>

ಇಂದೋರ್ ನ ಹೋಲ್ಕರ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಭಾರತ ಹಾಗೂ ನ್ಯೂಜಿಲ್ಯಾಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಮೂರನೇ ಹಾಗೂ ಅಂತಿಮ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ ತಂಡ, ಭಾರತವನ್ನು ೪೧ ರನ್‌ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ನ್ಯೂಜಿಲ್ಯಾಂಡ್, ನಿಗದಿತ ೫೦ ಓವರ್ ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೩೩೭ ರನ್ ಗಳಿಸಿತು. ನ್ಯೂಜಿಲೆಂಡ್ ನೀಡಿದ್ದ ೩೩೮ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ ೪೬ ಓವರ್‌ಗಳಲ್ಲಿ ೨೯೬ ರನ್‌ಗಳಿಸಲಷ್ಟೇ ಶಕ್ತವಾಯಿತು. ವಿರಾಟ್ ಕೊಹ್ಲಿ ಶತಕ ಗಳಿಸಿ, ತಂಡವನ್ನು ಗೆಲುವಿನ ದಡ ಸೇರಿಸಲು ಪ್ರಯತ್ನಿಸಿದರೂ, ಸಹ ಆಟಗಾರರ ಬೆಂಬಲ ಸಿಗದ ಕಾರಣ, ಸರಣಿ ಕೈವಶ ಮಾಡಿಕೊಳ್ಳುವಲ್ಲಿ ವಿಫಲರಾದರು. ಡ್ಯಾರಿಲ್ ಮಿಚೆಲ್ ಅವರನ್ನು ಪಂದ್ಯಶ್ರೇಷ್ಠ ಮತ್ತು ಸರಣಿಶ್ರೇಷ್ಠ ಎಂದು ಘೋಷಿಸಲಾಯಿತು. ಈ ಪಂದ್ಯದ ಗೆಲುವಿನ ಮೂಲಕ ನ್ಯೂಜಿಲ್ಯಾಂಡ್, ಏಕದಿನ ಸರಣಿಯನ್ನು ೨-೧ ಅಂತರದಲ್ಲಿ ಕೈವಶ ಮಾಡಿಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>